ದಿಃ 13.03.2026

**ಪ್ರಭಾರ ಅಪರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ**

**ಹೊಳಲ್ಕೆರೆ.**

**ಸಿ.ಸಿ.953/2020**

| | | | |
|---|---|---|---|
| ಸಾಕ್ಷಿಯ ಹೆಸರು | : | ನವೀನ್ | ಫ್ರಾಸಾಃ 8 |
| ತಂದೆಯ ಹೆಸರು | : | ತಿಮ್ಮಪ್ಪ | ಚಾಸಾಃ 3 |
| ವಯಸ್ಸು | : | 35 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ದಾಸೀಕಟ್ಟೆ ಗ್ರಾಮ | ದಿಃ 13.02.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

1. ಚಾಸಾ-1 ಮತ್ತು 2 ರವರು ಗೊತ್ತಿಲ್ಲ. ಸಾಕ್ಷಿ ನಿಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ-2(ಡಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ-3(ಡಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಹೊಳಲ್ಕೆರೆಯ ಪೊಲೀಸ್ ಠಾಣೆಯಲ್ಲಿ ಪೊಲೀಸರು ನನ್ನಿಂದ ಸುಮಾರು 8 ವರ್ಷಗಳ ಹಿಂದೆ ಪಡೆದಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಮಹಜರಿನ ಕ್ರಮವನ್ನು ಜರುಗಿಸಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿ ನಿಪಿ-4 ಮತ್ತು 5 ರ ಛಾಯಾಚಿತ್ರಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

3. ದಿನಾಂಕ 06.10.2018 ರಂದು ಅಪಘಾತದ ನಡೆದ ಸ್ಥಳದಲ್ಲಿ ಚಾಸಾ-1 ರವರು ಸ್ಥಳ ತೋರಿಸಿಸದ ಮೇರೆಗೆ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಬೆಳಿಗ್ಗೆ 10.00 ರಿಂದ 11.00 ಗಂಟೆವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿ, ಕಚ್ಚಾನಕ್ಷೆಯನ್ನು ತಯಾರಿಸಿ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳ ಪಂಚನಾಮೆಯ ಕಾಲಕ್ಕೆ ಉಪಸ್ಥಿತನಿದ್ದರೂ ಸಹಾ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ

ದಿಃ 13.03.2026

ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಇರುವುದಿಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**
(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.